# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 674

ಮಾನ್ಯ ಸದಸ್ಯರ ಹೆಸರು : ಶ್ರೀ ಎಸ್. ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 04.03.2021

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಿನಾಂಕ 01.04.2006ರ ನಂತರ ನೇಮಕವಾಗಿರುವ ನೌಕರರ ಎನ್.ಪಿ.ಎಸ್ (NPS) ರದ್ದತಿಗೊಳಿಸಿ, ಹಳೆಯ ಪಿಂಚಣಿ ಯೋಜನೆ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ನೂತನ ಪಿಂಚಣಿ ಯೋಜನೆಯನ್ನು ರದ್ದುಗೊಳಿಸಿ ಹಳೆಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿಲ್ಲ.<br><br>ನೂತನ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ/ ಮಾರ್ಪಾಡು ಮಾಡಲು ಸರ್ಕಾರದ ಆದೇಶ ಸಂಖ್ಯೆ: ಆಇ 107 ಪಿಇಎನ್ 2018, ದಿನಾಂಕ: 11.12.2018 ರನ್ವಯ ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದ್ದು, ಸಮಿತಿಯ ವರದಿಯನ್ನು ನಿರೀಕ್ಷಿಸಿದೆ. |
| ಆ) | ದಿನಾಂಕ:01.04.2006ರ ನಂತರ ನೇಮಕವಾಗಿರುವ ಎನ್.ಪಿ.ಎಸ್ ನೌಕರರನ್ನು ಮಲತಾಯಿಯಂತೆ ನಡೆಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಮರಣ ಮತ್ತು ನಿವೃತ್ತಿ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು 6ನೇ ವೇತನ ಆಯೋಗದಲ್ಲಿ ನೀಡಿದ್ದರೂ ಸ್ಪಷ್ಟ ಸರ್ಕಾರಿ ಆದೇಶ, ಮಾರ್ಗಸೂಚಿಗಳಿಲ್ಲದೇ ಮರಣ ಮತ್ತು ನಿವೃತ್ತಿ ಹೊಂದಿದ ನೌಕರರ ಮತ್ತು ಅವರ ಕುಟುಂಬಗಳು ಸದರಿ ಸೌಲಭ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಇಲ್ಲ.<br><br>ಸರ್ಕಾರದ ಆದೇಶ ಸಂಖ್ಯೆ: ಆಇ 34 ಪಿಇಎನ್ 2018, ದಿನಾಂಕ: 23.06.2018ರನ್ವಯ ಮರಣ ಮತ್ತು ನಿವೃತ್ತಿ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು ದಿನಾಂಕ: 01.04.2018 ರಿಂದ ವಿಸ್ತರಿಸಲಾಗಿದ್ದು, ಮೇಲ್ಕಂಡ ಸೌಲಭ್ಯಗಳಿಗೆ ಕಾರ್ಯವಿಧಾನವನ್ನು ರಚಿಸಿ ಕೆಲವು ಮಾರ್ಗಸೂಚಿಗಳನ್ನು ಹೊರಡಿಸಲು ಸರ್ಕಾರವು ಪರಿಶೀಲಿಸುತ್ತಿದೆ. |

ಆಇ 42 ಪಿಇಎನ್ 2021

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ